ಈ) ಎಂ.ಸಿ.ಐ. ನಾರ್ಮ್ಸ್ ಪ್ರಕಾರ ಕಾಲೇಜು ಕಟ್ಟಡ ಕಾಮಗಾರಿಯು ಅವಶ್ಯಕತೆಗೆ ಅನುಗುಣವಾಗಿ ಹಂತ ಹಂತವಾಗಿ ನಿರ್ಮಾಣವಾಗಲು ಕ್ರಮ ಕೈಗೊಳ್ಳಲಾಗಿದೆ.

213. ಶ್ರೀ ಶ್ರೀನಿವಾಸ್ ಎಂ. :– ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಮನಗರದಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ಮಾದರಿ ಆರೋಗ್ಯ ವಿಶ್ವವಿದ್ಯಾನಿಲಯದ ಬಗ್ಗೆ ಸರ್ಕಾರದವರು ಕೈಗೊಂಡ ಕ್ರಮಗಳೇನು ?

ಆ) ಈ ಆರೋಗ್ಯ ವಿಶ್ವವಿದ್ಯಾನಿಲಯ ನಿರ್ಮಾಣದ ಪ್ರಗತಿಯ ವಿವರಗಳೇನು ?

ಶ್ರೀ ಬಿ. ಶ್ರೀರಾಮುಲು (ವೈದ್ಯಕೀಯ ಶಿಕ್ಷಣ ಸಚಿವರು):–

ಅ) 216 ಎಕರೆ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ. 145 ಎಕರೆ ಜಮೀನನ್ನು ಕಟ್ಟಡ ನಿರ್ಮಾಣಕ್ಕಾಗಿ ಲೋಕೋಪಯೋಗಿ ಇಲಾಖೆಯ ವಶಕ್ಕೆ ನೀಡಲಾಗಿದೆ. ರೂ. 9.63 ಕೋಟಿಗಳನ್ನು ಭೂ ಸ್ವಾಧೀನಕ್ಕಾಗಿ ಕೆ.ಐ.ಎ.ಡಿ.ಬಿ.ಗೆ ಮತ್ತು ಮೊಬಲೈಜೇಷನ್ ಮುಂಗಡವಾಗಿ ರೂ. 33.37 ಕೋಟಿಗಳನ್ನು ಲೋಕೋಪಯೋಗಿ ಇಲಾಖೆಗೆ ಬಿಡುಗಡೆ ಮಾಡಲಾಗಿದೆ. ಕೆಲವೊಂದು ಸರ್ವೆ ನಂಬರುಗಳಿಗೆ ಸಂಬಂಧಿಸಿದಂತೆ ರಾಜ್ಯ ಉಚ್ಚ ನ್ಯಾಯಾಲಯದ ತಡೆಯಾಜ್ಞೆಗಳು ಇರುತ್ತವೆ. ತಡೆಯಾಜ್ಞೆಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳುವಂತೆ ಕೆ.ಐ.ಎ.ಡಿ.ಬಿ.ಗೆ ಸೂಚಿಸಲಾಗಿದೆ. ತನ್ನ ಪಾಲಿನ ರೂ. 50.00 ಕೋಟಿಗಳ ಹಣವನ್ನು ಸಂದಾಯಿಸುವಂತೆ ವಿಶ್ವವಿದ್ಯಾನಿಲಯವನ್ನು ಕೋರಿದೆ.

ಆ) ಭೂ ಸ್ವಾಧೀನ ಕಾರ್ಯ ಪ್ರಗತಿಯಲ್ಲಿದೆ.

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59